ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ಹೌದು. ಸರ್ಕಾರದ ಗಮನಕ್ಕೆ ಬಂದಿದೆ.

ಆ) ಪರ್ಮಿಟ್ ಇಲ್ಲದೆ ಅನಧಿಕೃತವಾಗಿ ಆಚರಣೆ ಮಾಡುತ್ತಿರುವ ಖಾಸಗಿ ವಾಹನಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವಂತೆ ಸಾರಿಗೆ ಅಧಿಕಾರಿಗಳಿಗೆ ಮತ್ತು ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ತುರುವೇಕೆರೆ ತಾಲ್ಲೂಕಿನ ಮಾರ್ಗಗಳು ರಾಷ್ಟ್ರೀಕರಣವಾಗದೇ ಇರುವುದರಿಂದ ಖಾಸಗಿ ಬಸ್ಸುಗಳಿಗೆ ನೀಡಿರುವ ರಹದಾರಿಗಳನ್ನು ನಿಲ್ಲಿಸಲು ಅವಕಾಶವಿರುವುದಿಲ್ಲ. ಅದಾಗ್ಯೂ ಖಾಸಗಿ ಬಸ್ ಹಾಗೂ ಮ್ಯಾಕ್ಸಿ ಕ್ಯಾಬ್‌ಗಳ ಅನಧಿಕೃತ ಸಂಚಾರವನ್ನು ನಿಯಂತ್ರಿಸಲು ತಪಾಸಣೆ ಕಾರ್ಯ ಕೈಗೊಂಡು ಒಟ್ಟು 52 ಬಸ್ಸುಗಳು ಮತ್ತು 29 ಮ್ಯಾಕ್ಸಿ ಕ್ಯಾಬ್‌ಗಳಿಗೆ ತನಿಖಾ ವರದಿ ನೀಡಿ ಒಟ್ಟು ರೂ. 4,31,958.00ಗಳ ತೆರಿಗೆ ವಸೂಲಿ ಮಾಡಲಾಗಿದೆ.

ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಸೌಕರ್ಯ

192 (552) ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ) ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುರುವೇಕೆರೆ ತಾಲ್ಲೂಕಿನ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ವಸತಿ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು):

ಅ) ಹೌದು. ಪ್ರಸ್ತುತ ತುರುವೇಕೆರೆ ತಾಲ್ಲೂಕಿಗೆ ಸೇರಿದ ಎರಡು ಪೊಲೀಸ್ ಠಾಣೆ ಮತ್ತು ಎರಡು ಪೊಲೀಸ್ ಹೊರಠಾಣೆಗಳ ಒಟ್ಟು ಸಿಬ್ಬಂದಿ ಮಂಜೂರಾತಿ ಬಲ 76 ಇರುತ್ತದೆ. ಈ ಪೈಕಿ 40 ಸಿಬ್ಬಂದಿಗಳಿಗೆ ಈಗಾಗಲೇ ವಸತಿಗೃಹ ಒದಗಿಸಲಾಗಿದ್ದು, ಉಳಿದ 36 ಸಿಬ್ಬಂದಿಗಳಿಗೆ ವಸತಿಗೃಹ ಒದಗಿಸಬೇಕಾಗಿದೆ.

ಆ) ರಾಜ್ಯದ ವಿವಿಧ ಜಾಗಗಳಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ಒದಗಿಸುವ ನಿಟ್ಟಿನಲ್ಲಿ ತ್ವರಿತ ವಸತಿ ಯೋಜನೆ–3ರಡಿ ರೂ. 440.00 ಕೋಟಿ ವೆಚ್ಚದಲ್ಲಿ 4333 ವಸತಿ ಗೃಹಗಳನ್ನು ಕರ್ನಾಟಕ ರಾಜ್ಯ ಪೊಲೀಸ್ ಗೃಹ ನಿರ್ಮಾಣ ನಿಗಮದ ಮೂಲಕ ನಿರ್ಮಿಸಲು ಸರ್ಕಾರ

ಮಂಜೂರಾತಿ ನೀಡಿ, ಈ 4333 ವಸತಿ ಗೃಹಗಳನ್ನು ನಿರ್ಮಿಸಿದ ಬಳಿಕ ಹಣಕಾಸಿನ ಲಭ್ಯತೆಯನ್ನು ಅನುಸರಿಸಿ ತುರುವೇಕೆರೆ ತಾಲ್ಲೂಕಿನಲ್ಲಿ ಬಾಕಿ ಸಿಬ್ಬಂದಿಗೆ ವಸತಿ ಗೃಹಗಳನ್ನು ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

ಗುಂಡ್ಲುಪೇಟೆ ತಾಲ್ಲೂಕು ಆಸ್ಪತ್ರೆಗೆ ಕಟ್ಟಡ ನಿರ್ಮಾಣ

193 (554) ಶ್ರೀ ಮಹದೇವ ಪ್ರಸಾದ ಹೆಚ್.ಎಸ್. (ಗುಂಡ್ಲುಪೇಟೆ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕು ಆಸ್ಪತ್ರೆಯನ್ನು 50 ಹಾಸಿಗೆಗಳಿಂದ 100 ಹಾಸಿಗೆಗಳ ಹಂತಕ್ಕೆ ಮೇಲ್ದರ್ಜೆಗೇರಿಸಿ, ಹಲವು ವರ್ಷಗಳೇ ಕಳೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ಆಸ್ಪತ್ರೆ ಕಟ್ಟಡ ನಿರ್ಮಾಣ ಹಾಗೂ 100 ಹಾಸಿಗೆಗಳಿಗೆ ಒದಗಿಸಬೇಕಾದ ಸೌಲಭ್ಯಗಳನ್ನು ಒದಗಿಸುವಲ್ಲಿ ಆರೋಗ್ಯ ಇಲಾಖೆಯು ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಡಾ॥ ಡಿ.ಎಂ. ನಂಜುಂಡಪ್ಪ ಪ್ರಾದೇಶಿಕ ಅಸಮತೋಲನ ಸಮಿತಿ ಪ್ರಕಾರ ಅತಿ ಹಿಂದುಳಿದ ತಾಲ್ಲೂಕು ಆದ ಗುಂಡ್ಲುಪೇಟೆ ತಾಲ್ಲೂಕು ಆಸ್ಪತ್ರೆಗೆ 100 ಹಾಸಿಗೆಗಳ ಸೌಲಭ್ಯ ಒದಗಿಸಲು ಸರ್ಕಾರ ತಾರತಮ್ಯ ಮಾಡುತ್ತಿರಲು ಕಾರಣವೇನು;

ಈ) ಆದ್ಯತೆ ಮೇರೆಗೆ ಈ ಆಸ್ಪತ್ರೆ, ಕಟ್ಟಡ ಹಾಗೂ ಇತರೆ ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು; (ವಿವರಿಸುವುದು)?

ಶ್ರೀ ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿದೆ.

ಆ) ಮತ್ತು ಇ) ಗುಂಡ್ಲುಪೇಟೆ ತಾಲ್ಲೂಕು ಆಸ್ಪತ್ರೆಯನ್ನು ಸರ್ಕಾರವು ದಿನಾಂಕ: 15.03.2003ರ ಆದೇಶದಲ್ಲಿ 50 ಹಾಸಿಗೆಗಳಿಂದ 100 ಹಾಸಿಗೆಗಳ ಹಂತಕ್ಕೆ ಮೇಲ್ದರ್ಜೆಗೇರಿಸಿದೆ. ಸದರಿ ಆಸ್ಪತ್ರೆಯ ಕಟ್ಟಡ ನಿರ್ಮಾಣ ಹಾಗೂ ಇತರೆ ಮೂಲಭೂತ ಸೌಕರ್ಯ ಒದಗಿಸುವ ಕುರಿತಂತೆ ಹಣಕಾಸಿನ ಲಭ್ಯತೆ ಆಧಾರದ ಮೇಲೆ ಹಂತ–ಹಂತವಾಗಿ ತೆಗೆದುಕೊಳ್ಳಬೇಕಾಗಿದೆ.